**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/164/ಉ.ಶಿ.ಅ.ತ/ಬೋಧಕೇತರ/2021-22 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ

ಬೆಂಗಳೂರು,ದಿನಾಂಕ: 01.04.2022

## ಸುತ್ತೋಲೆ

**ವಿಷಯ:** ಧಾರವಾಡದ ಉನ್ನತ ಶಿಕ್ಷಣ ಅಕಾಡೆಮಿಯಲ್ಲಿ ನಡೆಯುವ ಆಡಳಿತಾತ್ಮಕ ತರಬೇತಿಗೆ ಕಾಲೇಜು ಶಿಕ್ಷಣ ಇಲಾಖೆಯ ಬೋಧಕೇತರ ಸಿಬ್ಬಂದಿಗಳನ್ನು ನಿಯೋಜಿಸುವ ಬಗ್ಗೆ.

**ಉಲ್ಲೇಖ:** ನಿರ್ದೇಶಕರು, ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ಇವರ ಪತ್ರ ಸಂಖ್ಯೆ: ಕರಾಉಶಿಇ/ ಸಿಡಬ್ಲ್ಯೂ.ಟಿ.ಪಿ (7 & 8)ಬೋಧಕೇತರ ಸಿಬ್ಬಂದಿ/2021-22, ದಿನಾಂಕ:28.03.2022.

******

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಬೋಧಕೇತರರಿಗೆ ಕರ್ನಾಟಕ ನಾಗರಿಕ ಸೇವೆಗಳ ನಿಯಮಗಳ ಪ್ರಕಾರ ಕಛೇರಿ ಕಾರ್ಯಗಳಲ್ಲಿ ಕಾರ್ಯತತ್ಪರತೆ, ವೃತ್ತಿಪರತೆ, ನಿರ್ವಹಣಾ ಮಾಹಿತಿ ವ್ಯವಸ್ಥೆಯಲ್ಲಿನ ಅಗತ್ಯತೆ ಮತ್ತು ಸೂಕ್ಷ್ಮ ವ್ಯತ್ಯಾಸಗಳನ್ನು ಚರ್ಚಿಸುವುದು ಇತ್ಯಾದಿಗಳನ್ನು ಸಿಬ್ಬಂದಿಗಳು ಕಾರ್ಯಪ್ರವೃತ್ತಿಯಲ್ಲಿ ಅಳವಡಿಸಿಕೊಳ್ಳುವ ಸಲುವಾಗಿ ಹಾಗೂ ಬೋಧಕೇತರರ ಸಾಮರ್ಥ್ಯವೃದ್ಧಿಗಾಗಿ ತರಬೇತಿ ಕಾರ್ಯಕ್ರಮಗಳು ಅವಶ್ಯವಾಗಿದ್ದು, ಅಂತಹ ತರಬೇತಿಯನ್ನು ಇಲಾಖೆಯಲ್ಲಿಯೇ ನೀಡುವ ಉದ್ದೇಶದಿಂದ **ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಆವರಣದಲ್ಲಿರುವ ಉನ್ನತ ಶಿಕ್ಷಣ ಅಕಾಡೆಮಿ**ಯಲ್ಲಿ ಕೇಂದ್ರ ಕಛೇರಿ, ಪ್ರಾದೇಶಿಕ ಕಛೇರಿ, ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ **ಗ್ರೂಪ್-ಸಿ** ವರ್ಗದ ಬೋಧಕೇತರ ಸಿಬ್ಬಂದಿಗಳಿಗೆ ಆಡಳಿತಾತ್ಮಕ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ತರಬೇತಿಗೆ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳನ್ನು ನಿಯೋಜಿಸುವ ಸಂಬಂಧ ಅಗತ್ಯ ವಿವರಗಳ ಮಾಹಿತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿರುವ **Google Form ನಲ್ಲಿ (Link ಈ ಸುತ್ತೋಲೆಯೊಂದಿಗೆ ಶಿಕ್ಷಣ ಇಲಾಖೆಯ ವೆಬ್‌ಸೈಟ್** ನಲ್ಲಿ ಅಳವಡಿಸಲಾಗಿದೆ) ಪ್ರತಿ ಸಿಬ್ಬಂದಿಯು ಪ್ರತ್ಯೇಕವಾಗಿ ಮಾಹಿತಿಯನ್ನು ವಿಳಂಬವಾಗದಂತೆ ಕಡ್ಡಾಯವಾಗಿ ದಿನಾಂಕ:05.04.2022 ರ ಸಂಜೆ:5.00ರೊಳಗಾಗಿ **upload** ಮಾಡಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

R. Nugeshal

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತಶಾಖೆಗೆ- ಮಾಹಿತಿಗಾಗಿ.
2. ನಿರ್ದೇಶಕರು, ಉನ್ನತ ಶಿಕ್ಷಣ ಅಕಾಡೆಮಿ, ಸುವರ್ಣ ಮಹೋತ್ಸವ ಕಟ್ಟಡ, ಕರ್ನಾಟಕ ವಿಶ್ವವಿದ್ಯಾಲಯ ಆವರಣ, ಧಾರವಾಡ.
3. ಕಛೇರಿ ಪ್ರತಿ.